# ಕರ್ನಾಟಕ ಸರ್ಕಾರ

ಸಂಖ್ಯೆ: MWD 378 MDS 2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:16-11-2021.

**ಇವರಿಂದ:**

ಸರ್ಕಾರದ ಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

**ಇವರಿಗೆ,**

ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ವಿ.ವಿ.ಗೋಪುರ,
ಬೆಂಗಳೂರು.

**ಮಾನ್ಯರೇ,**

**ವಿಷಯ :** ರಾಜ್ಯದಲ್ಲಿ ಅಪೂರ್ಣಗೊಂಡಿರುವ ಅಲ್ಪಸಂಖ್ಯಾತರ ಸಮುದಾಯಭವನಗಳಿಗೆ ಪೂರ್ಣಗೊಳಿಸಲು ಅನುದಾನ ಮಂಜೂರು ಮಾಡುವ ಬಗ್ಗೆ.

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಅಪೂರ್ಣಗೊಂಡಿರುವ ಅಲ್ಪಸಂಖ್ಯಾತರ ಸಮುದಾಯಭವನಗಳಿಗೆ ಪೂರ್ಣಗೊಳಿಸಲು ಅನುದಾನ ಮಂಜೂರು ಮಾಡುವ ಬಗ್ಗೆ ಸಹಮತಿಗಾಗಿ ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು ಆರ್ಥಿಕ ಇಲಾಖೆಯವರು ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಪ್ರಸ್ತಾವನೆಗೆ ಸಂಬಂಧಿಸಿದಂತೆ ಪ್ರಸ್ತುತ ಸಮುದಾಯಭವನ ಯೋಜನೆಯನ್ನು 2020-21 ನೇ ಸಾಲಿನಿಂದ ಕೈಬಿಡಲಾಗಿರುತ್ತದೆ. ಆದುದರಿಂದ ಸಮುದಾಯಭವನ ಯೋಜನೆಗೆ ಅನುದಾನ ಒದಗಿಸಿರುವುದಿಲ್ಲ. ಪ್ರಸ್ತುತ ಕೋವಿಡ್-19 ರ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ರಾಜಸ್ವ ಸಂಗ್ರಹ ಕಡಿಮೆಯಿರುವ ಪ್ರಸ್ತುತ ಆರ್ಥಿಕ ಸಂಕಷ್ಟದ ಪರಿಸ್ಥಿತಿಯಲ್ಲಿ ಹೆಚ್ಚುವರಿ ಅನುದಾನ ಒದಗಿಸುವುದು ಸಾಧ್ಯವಿಲ್ಲದ ಕಾರಣ ಹೆಚ್ಚುವರಿ ಅನುದಾನ ಕೋರಿರುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ ಎಂಬ ವಿಷಯವನ್ನು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

16/11/2021

**(ಮುಕ್ತಾರ್ ಪಾಷ ಹೆಚ್.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

16/11

E:\varalakshmi mdm\2021\letter\2021